# ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ

"ಜ್ಞಾನ ಸಾಗರ" ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ - 583 105

**VIJAYANAGARA SRI KRISHNADEVARAYA UNIVERSITY**

"Jnana Sagara" Campus, Vinayaka Nagara, Cantonment, Ballari - 583 105

VSKU INSPIRING DECADE 2010-2020

**ಕುಲಸಚಿವರು** **ಫೋನ್:08392-242703**


ಸಂಖ್ಯೆ: ವಿಶ್ರೀಕೃವಿಬ/ಆಡಳಿತ/ವಿಕಘ/ವಿನಿಪ್ರ/2020-21/1427 ದಿನಾಂಕ: 02.11.2020

## ಪ್ರವೇಶಾತಿ ಅಧಿಸೂಚನೆ

ವಿಷಯ : 2020-21ನೇ ಸಾಲಿನ ವಿಶ್ವವಿದ್ಯಾಲಯದ ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿ ಕುರಿತು

ಉಲ್ಲೇಖ 1 ದಿನಾಂಕ: 28.05.2020ರಂದು ಜರುಗಿದ ಸಿಂಡಿಕೇಟ್ ಸಭೆಯ ನಿರ್ಣಯ ಸಂಖ್ಯೆ:04

2 ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 27.10.2020

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳನ್ವಯ ವಿಶ್ವವಿದ್ಯಾಲಯದ 2020-21ನೇ ಸಾಲಿನ ಸ್ನಾತಕೋತ್ತರ ಪದವಿ ಕೋರ್ಸ್‌ಗಳ ಪ್ರಥಮ ಸೆಮಿಸ್ಟರ್‌ನ ಶೈಕ್ಷಣಿಕ ವೇಳಾಪಟ್ಟಿಯನ್ನು ಹೊರಡಿಸಿರುವ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ಮುಖ್ಯ ಆವರಣದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಹಾಗೂ ಸಾಮಾನ್ಯ ವರ್ಗದ ವಿದ್ಯಾರ್ಥಿನಿಯರಿಗೆ ಪ್ರಥಮ ಸೆಮಿಸ್ಟರ್‌ನ 2020-21ನೇ ಶೈಕ್ಷಣಿಕ ಸಾಲಿಗಾಗಿ ವಿದ್ಯಾರ್ಥಿ ನಿಲಯದ ಪ್ರವೇಶಾತಿಗೆ ಮಾರ್ಗಸೂಚಿಗಳನ್ವಯ ಅಧಿಸೂಚನೆಯನ್ನು ಹೊರಡಿಸಲಾಗಿದೆ. ವಿವರಗಳು ಈ ಕೆಳಗಿನಂತಿವೆ.

| ಕ್ರಮ ಸಂ | ವೇಳಾಪಟ್ಟಿ | ದಿನಾಂಕ |
|---|---|---|
| 1 | ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸುವ ಪ್ರಾರಂಭದ ದಿನಾಂಕ | 10 ನವೆಂಬರ್ 2020 |
| 2 | ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ (ದಂಡರಹಿತ) | 20 ನವೆಂಬರ್ 2020 |
| 3 | ವಿದ್ಯಾರ್ಥಿ ನಿಲಯಗಳ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ (ದಂಡ ಶುಲ್ಕ ರೂ. 200/-ಗಳೊಂದಿಗೆ) | 26 ನವೆಂಬರ್ 2020 |
| 4 | ಪ್ರವೇಶಾತಿಯ ಅರ್ಜಿಶುಲ್ಕ ಪ.ಜಾ/ಪ.ಪಂ ವಿದ್ಯಾರ್ಥಿಗಳಿಗೆ | 50/- |
| 5 | ಪ್ರವೇಶಾತಿಯ ಅರ್ಜಿಶುಲ್ಕ ಒ.ಬಿ.ಸಿ ಮತ್ತು ಸಾಮಾನ್ಯ ವಿದ್ಯಾರ್ಥಿಗಳಿಗೆ | 100/- |

ಮುಂದುವರೆದು ವಿದ್ಯಾರ್ಥಿ ನಿಲಯಕ್ಕೆ ಪ್ರವೇಶ ಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ವಿಶ್ವವಿದ್ಯಾಲಯದ ಅಂತರ್ಜಾಲದಿಂದ ಅರ್ಜಿಯನ್ನು ಪಡೆದು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯನ್ನು ಎಲ್ಲಾ ದಾಖಲೆಗಳೊಂದಿಗೆ ನಿಗದಿಪಡಿಸಿದ ಅರ್ಜಿ ಶುಲ್ಕದೊಂದಿಗೆ ಸಂಬಂಧಿಸಿದ ವಿಭಾಗದ ಮುಖ್ಯಸ್ಥರ ದೃಢೀಕರಣದೊಂದಿಗೆ ಪ.ಜಾ/ಪ.ಪಂ ವಿದ್ಯಾರ್ಥಿ/ವಿದ್ಯಾರ್ಥಿನಿಯರು **ಪ.ಜಾ/ಪ.ಪಂಗಡ ವಿಶೇಷ ಘಟಕಕ್ಕೆ** ಹಾಗೂ ಒ.ಬಿ.ಸಿ ಮತ್ತು ಸಾಮಾನ್ಯ ವರ್ಗದ ವಿದ್ಯಾರ್ಥಿನಿಯರು **ಹಿಂದುಳಿದ ವರ್ಗಗಳ ಘಟಕಕ್ಕೆ** ಸಲ್ಲಿಸಲು ಸೂಚಿಸಲಾಗಿದೆ.

02/11/2020

**ಕುಲಸಚಿವರು**

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ

ಬಳ್ಳಾರಿ

ಗೆ,

ಎಲ್ಲಾ ವಿಭಾಗ/ಘಟಕಗಳ ಮುಖ್ಯಸ್ಥರು/ಸಂಯೋಜಕರುಗಳಿಗೆ.

ಪ್ರತಿಗಳು

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ವಿಶ್ರೀಕೃ ವಿಶ್ವವಿದ್ಯಾಲಯ ಬಳ್ಳಾರಿ.
2. ಹಣಕಾಸು ಅಧಿಕಾರಿಗಳು, ವಿಶ್ರೀಕೃ ವಿಶ್ವವಿದ್ಯಾಲಯ ಬಳ್ಳಾರಿ.
3. ಸಂಯೋಜಕರು, ಐ.ಸಿ.ಟಿ ಘಟಕ ವಿಶ್ರೀಕೃ ವಿಶ್ವವಿದ್ಯಾಲಯ ಬಳ್ಳಾರಿ.
4. ಸಂಯೋಜಕರು, ಪ.ಜಾ/ಪ.ಪಂ ವಿಶೇಷ ಘಟಕ ವಿಶ್ರೀಕೃ ವಿಶ್ವವಿದ್ಯಾಲಯ ಬಳ್ಳಾರಿ.
5. ಸಂಯೋಜಕರು, ಹಿಂದುಳಿದ ವರ್ಗಗಳ ಘಟಕ ವಿಶ್ರೀಕೃ ವಿಶ್ವವಿದ್ಯಾಲಯ ಬಳ್ಳಾರಿ.
6. ನಿಲಯಪಾಲಕರು, ಎಲ್ಲಾ ವಸತಿ ನಿಲಯಗಳು ವಿಶ್ರೀಕೃ ವಿಶ್ವವಿದ್ಯಾಲಯ ಬಳ್ಳಾರಿ.
7. ಕಛೇರಿ ಪ್ರತಿ.